ದಿನಾಂಕಃ 08-06-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ</u>- ವಾದಿ ಪರವಾಗಿ ಶ್ರೀ. ಎಸ್.ಎನ್.ವಕೀಲರಿಂದಃ-**

ಈ ದಾವೆಯನ್ನು ಯಾರು ಯಾರ ವಿರುದ್ಧ ಸಲ್ಲಿಸಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಈ ದಿನ ನನ್ನನ್ನು 2 ನೇ ಪ್ರತಿವಾದಿ ಕರೆದುಕೊಂಡು ಬಂದಿರುತ್ತಾರೆ. 2 ನೇ ಪ್ರತಿವಾದಿಯ ತಂದೆಯ ಹೆಸರು ನನಗೆ ಗೊತ್ತಿಲ್ಲ. ಈ ದಾವೆಯಲ್ಲಿ ಏನು ಪರಿಹಾರ ಕೋರಿ ಸಲ್ಲಿಸಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಈ ದಾವೆಯನ್ನು ಯಾವ ಸರ್ವೇ ನಂಬರ್ ಆಸ್ತಿಗಳ ಮೇಲೆ ಸಲ್ಲಿಸಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ದಾವಾ ಆಸ್ತಿಗಳು ನಮ್ಮ ಜಮೀನಿನ ಪಕ್ಕದಲ್ಲಿಯೇ ಇವೆ. 2 ನೇ ಪ್ರತಿವಾದಿಗೆ ಎಷ್ಟು ಜನ ಅಕ್ಕ ತಂಗಿಯರಿದ್ದಾರೆ ಎಂಬುದು ನನಗೆ ಗೊತ್ತಿಲ್ಲ, ಅವರುಗಳನ್ನು ನಾನು ನೋಡಿರುವುದಿಲ್ಲ. 2 ನೇ ಪ್ರತಿವಾದಿಯ ಮನೆಯ ವ್ಯವಹಾರಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ದಾವಾ ಆಸ್ತಿಗಳ ಕಂದಾಯ ದಾಖಲೆಗಳನ್ನು ನಾನು ನೋಡಿರುವುದಿಲ್ಲ. ದಾವಾ ಆಸ್ತಿಗಳ ಪಹಣಿ ಪತ್ರಿಕೆಗಳು ಯಾರ ಹೆಸರಿನಲ್ಲಿವೆ ಎಂಬುದನ್ನು ನಾನು ನೋಡಿರುವುದಿಲ್ಲ. ನಾನು ವ್ಯವಸಾಯ ಮಾಡುತ್ತೇನೆ. 2 ನೇ ಪ್ರತಿವಾದಿಯ ತಂದೆ ತಾಯಿಯರು ಯಾವ ಆಸ್ತಿಗಳನ್ನು ಸಂಪಾದಿಸಿದ್ದರು ಎಂಬುದು ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿ ನೀಡಿದ ಮಾಹಿತಿ ಮೇರೆಗೆ ನಾನು ನನ್ನ ಸಾಕ್ಷ್ಯ ಪ್ರಮಾಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ . 2 ನೇ ಪ್ರತಿವಾದಿ ನೀಡಿದ ಮಾಹಿತಿಯನ್ನು ಹೊರತುಪಡಿಸಿ ನನಗೆ ಬೇರೆ ಯಾವುದೇ ಮಾಹಿತಿ ಇರುವುದಿಲ್ಲ. ದಾವಾ ಆಸ್ತಿಗಳಲ್ಲಿ ವಾದಿ ಮತ್ತು ಪ್ರತಿವಾದಿಯರ ನಡುವೆ ವಿಭಾಗ ಆಗಿದೆ ಎಂಬುದರ ಬಗ್ಗೆ ಯಾವುದೇ

ದಾಖಲೆಗಳನ್ನು ನಾನು ನೋಡಿರುವುದಿಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ . ದಾವಾ ಆಸ್ತಿಗಳಲ್ಲಿ ಯಾವುದೇ ಬೆಳೆಗಳಿಲ್ಲದೆ ಬೀಳು ಬಿದ್ದಿರುತ್ತದೆ.

ದಾವಾ ಆಸ್ತಿಗಳಲ್ಲಿ ವಾದಿ ಮತ್ತು ಪ್ರತಿವಾದಿಯರು ವಿಭಾಗ ಮಾಡಿಕೊಂಡು ಪ್ರತ್ಯೇಕವಾಗಿ ಸ್ವಾಧೀನಾನುಭವ ಹೊಂದಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕೋಡಗದಾಲದಲ್ಲಿ ತಳ್ಳುವ ಗಾಡಿಯ ಮೂಲಕ ಕಬ್ಬಿನ ಜ್ಯೂಸ್ ವ್ಯಾಪಾರ ಮಾಡುತ್ತೇನೆ. ನಮ್ಮ ಊರಿನಿಂದ ಕೋಡಗದಾಲ ಸುಮಾರು 2 ಕಿ.ಮೀ. ದೂರದಲ್ಲಿದೆ. ಆ ಕಬ್ಬಿನ ತಳ್ಳುವ ಗಾಡಿಯನ್ನು ವ್ಯಾಪಾರ ಆದ ನಂತರ 2 ನೇ ಪ್ರತಿವಾದಿಯ ಮನೆಯ ಹತ್ತಿರ ನಿಲ್ಲಿಸುತ್ತೇನೆ ಎಂದರೆ ಸರಿಯಲ್ಲ. ವಾದಿ ಮತ್ತು ಪ್ರತಿವಾದಿಯರ ಮನೆಯ ವ್ಯವಹಾರಗಳ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ 2 ನೇ ಪ್ರತಿವಾದಿಯ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯರ ತಂದೆ ಮತ್ತು 2 ನೇ ಪ್ರತಿವಾದಿಯ ತಂದೆ ಎಷ್ಟು ವರ್ಷಗಳ ಹಿಂದೆ ಮೃತಪಟ್ಟರು ಎಂಬುದು ನನಗೆ ಗೊತ್ತಿಲ್ಲ. ವಾದಿ ಮತ್ತು ಪ್ರತಿವಾದಿಯರ ನಡುವೆ ದಾವಾ ಆಸ್ತಿಗಳಲ್ಲಿ ಯಾವುದೇ ವಿಭಾಗ ಆಗಿರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ.

**ಮರು ವಿಚಾರಣೆಃ- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ